# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1380 |
| ಸದಸ್ಯರ ಹೆಸರು | : | ಶ್ರೀ ಶಶೀಲ್ ಜಿ ನಮೋಶಿ (ಶಿಕ್ಷಕರ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | 24.12.2021 |
| ಉತ್ತರಿಸುವ ಸಚಿವರು | : | ಮಾನ್ಯ ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಸಚಿವರು |

| ಕ್ರಮ ಸಂಖ್ಯೆ | ಪ್ರಶ್ನೆ | ಉತ್ತರ |
|---|---|---|
| ಅ | ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿಗೆ ಕೇವಲ ಅಧ್ಯಕ್ಷರನ್ನು ಮಾತ್ರ ನೇಮಿಸಿ, ಪೂರ್ಣ ಪ್ರಮಾಣದ ಆಡಳಿತ ಮಂಡಳಿ ರಚಿಸದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಪೂರ್ಣ ಪ್ರಮಾಣದ ಆಡಳಿತ ಮಂಡಳಿ ಯಾವಾಗ ರಚನೆ ಮಾಡಲಾಗುವುದು; | -ಹೌದು-<br><br>ಕಲ್ಯಾಣ (ಹಿಂದಿನ ಹೈದ್ರಾಬಾದ) ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿಯು ಸರ್ಕಾರದ ಅಧಿಸೂಚನೆ ಸಂಖ್ಯೆ: ಡಿಪಿಎಆರ್:ಪಿಎಲ್‌ಎಕ್ಸ್:2012, ದಿನಾಂಕ: 06.11.2013ರನ್ವಯ ರಚನೆಯಾಗಿದ್ದು, 2013 ರಿಂದ ಪ್ರಾರಂಭವಾಗಿದೆ.<br><br>ಮಂಡಳಿಯ ಆಡಳಿತ ಮಂಡಳಿಗೆ ಒಬ್ಬರು ಅಧ್ಯಕ್ಷರು, ಎಂಟು ಜನ ವಿಧಾನ ಸಭೆಯ ಸದಸ್ಯರು, ಇಬ್ಬರು ವಿಧಾನ ಪರಿಷತ್ ಸದಸ್ಯರು, ಒಬ್ಬರು ಸಂಸತ್ತಿನ ಸದಸ್ಯರು, ಒಬ್ಬರು ಜಿಲ್ಲಾ ಪಂಚಾಯತ ಅಧ್ಯಕ್ಷರು, ಒಬ್ಬರು ಸ್ಥಳೀಯ ಸಂಸ್ಥೆಯ ಅಧ್ಯಕ್ಷ/ಮೇಯರ್ ಮತ್ತು ಐದು ಜನ ತಜ್ಞರನ್ನು ಒಳಗೊಂಡಿರುತ್ತದೆ. ಪ್ರಸ್ತುತ ಮಂಡಲಿಗೆ ಒಬ್ಬರು ಅಧ್ಯಕ್ಷರು ಹಾಗೂ ಒಬ್ಬರು ಸದಸ್ಯರನ್ನು ನೇಮಕ ಮಾಡಲಾಗಿದೆ.<br><br>ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿಯನ್ನು ಪೂರ್ಣ ಪ್ರಮಾಣದಲ್ಲಿ ರಚನೆ ಮಾಡುವ ಬಗ್ಗೆ ಪ್ರಸ್ತಾವನೆ ಸರ್ಕಾರದ ಪರಿಶೀಲನೆಯಲ್ಲಿ ಇದೆ. |
| ಆ | ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿಗೆ ಪೂರ್ಣ ಪ್ರಮಾಣದ ಆಡಳಿತ ಮಂಡಳಿ ರಚಿಸದಿರುವುದರಿಂದ ಮಂಡಲೀಯ ಅಭಿವೃದ್ಧಿ ಕಾರ್ಯಗಳು ಕುಂಠಿತಗೊಳ್ಳುತ್ತಿರುವುದು ಸರ್ಕಾರದ ಗಮನಕ್ಕೆ ಇದೆಯೇ; ಹಾಗಿದ್ದಲ್ಲಿ, ಪೂರ್ಣ ಪ್ರಮಾಣದ ಆಡಳಿತ ಮಂಡಳಿ ರಚಿಸಲು ಸರ್ಕಾರಕ್ಕಿರುವ ತೊಂದರೆಗಳೇನು? | -ಇಲ್ಲ-<br><br>2021-22ನೇ ಸಾಲಿನಲ್ಲಿ ಮಂಡಳಿಗೆ ರೂ.1492.97 ಕೋಟಿಗಳನ್ನು ಆಯವ್ಯಯದಲ್ಲಿ ನಿಗಧಿಪಡಿಸಿದ್ದು, ಈವರೆಗೆ ರೂ.415.16 ಕೋಟಿಗಳನ್ನು ಬಿಡುಗಡೆ ಮಾಡಲಾಗಿದ್ದು, ಆರಂಭಿಕ ಶಿಲ್ಕನ್ನು ಒಳಗೊಂಡಂತೆ ರೂ.620.65 ಕೋಟಿಗಳು ವೆಚ್ಚವಾಗಿರುತ್ತದೆ. **ಶೇಕಡ** 75 **ರಷ್ಟು ಆರ್ಥಿಕವಾಗಿ** ಪ್ರಗತಿ ಸಾಧಿಸಲಾಗಿದೆ. |